ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೩೨

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ
## (ಮುಂದುವರೆದ ಉಪವೇಶನಗಳು)
## ಗುರುವಾರ, ದಿನಾಂಕ: ೨೫ನೇ ನವೆಂಬರ್, ೨೦೧೭

---

### ಸಮೂಹ – IV

೧. ಮುಖ್ಯಮಂತ್ರಿಗಳು.
೨. ಗೃಹ ಸಚಿವರು.
೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.
೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.
೫. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು.
೬. ಅಬಕಾರಿ ಸಚಿವರು.

---

### ವಿಜಯಪುರ ನಗರದ ಪುರಾತನ ಕಾಲದ ಬಾವಿಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೬ (೪೬೨೮) ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಜಯಪುರ ನಗರದಲ್ಲಿರುವ ಪುರಾತನ ಕಾಲದ ಬಳಕೆ ನೀರಿನ ಬಾವಿಗಳು ಎಷ್ಟು ಮತ್ತು ಅವುಗಳ ಈಗಿನ ಸ್ಥಿತಿಗತಿಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ; (ವಿವರ ನೀಡುವುದು)

(ಆ) ಈ ಪುರಾತನ ಬಾವಿಗಳು ನಗರದ ನೀರಿನ ಸಮಸ್ಯೆಯನ್ನು ನೀಗಿಸುತ್ತಿದ್ದು, ಇವುಗಳಲ್ಲಿ ಬಹುತೇಕ ಬಾವಿಗಳನ್ನು ಒತ್ತುವರಿ ಮಾಡಿ ಆ ಜಾಗಗಳಲ್ಲಿ ಕಟ್ಟಡಗಳನ್ನು ಕಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಾವಿ ಜಾಗವನ್ನು ವಶಪಡಿಸಿಕೊಳ್ಳಲು ಯಾವ ಕ್ರಮ ತೆಗೆದುಕೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಸಣ್ಣ ಮತ್ತು ದೊಡ್ಡ ಬಾವಿಗಳನ್ನು ಮುಚ್ಚಲು ಅನುಮತಿ ನೀಡದವರ್ಯಾರು, ಈ ಜಾಗಗಳನ್ನು ಅತಿಕ್ರಮಿಸಿ ನಿರ್ಮಿಸಿರುವ ಕಟ್ಟಡಗಳನ್ನು ತೆರವುಗೊಳಿಸಲು ಸರ್ಕಾರ ತೆಗೆದುಕೊಳ್ಳುವ ದಿಟ್ಟ ನಿರ್ಧಾರಗಳೇನು ; ಈ ಜಾಗವನ್ನು ಮಾರಾಟ ಮಾಡಿರುತ್ತಾರೆಂಬ ಗಂಭೀರ ಆರೋಪವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಇದನ್ನು ತಡೆಗಟ್ಟಲು ಯಾವ ಕ್ರಮ ತೆಗೆದುಕೊಂಡಿದೆ ಹಾಗೂ ಮಾರಾಟ ಮಾಡಿದವರ ವಿರುದ್ಧ ಯಾವ ಶಿಸ್ತು ಕ್ರಮ ತೆಗೆದುಕೊಂಡಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಅತಿಕ್ರಮಣ ಮಾಡಿರುವ ಬಾವಿಯ ಜಾಗವನ್ನು ಎಷ್ಟು ಕಾಲಮಿತಿಯೊಳಗೆ ತೆರವುಗೊಳಿಸಲಾಗುವುದು ; ಈ ಕುರಿತು ಸಮಗ್ರ ತನಿಖೆ ನಡೆಸಲು ಸರ್ಕಾರ ಉದ್ದೇಶಿಸಿದೆಯೇ ? (ವಿವರವಾದ ಮಾಹಿತಿ ನೀಡುವುದು)

## ಕಾರ್ಯಕರ್ತರ ಮೇಲೆ ಹಲ್ಲೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೪೬೭ (೪೭೪೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಬಿಜೆಪಿ ಕಾರ್ಯಕರ್ತರು ಹಾಗೂ ಹಿಂದು ಸಂಘ ಪರಿವಾರ ಕಾರ್ಯಕರ್ತರ ಮೇಲೆ ಪದೇ ಪದೇ ಹಲ್ಲೆ ಮತ್ತು ಹತ್ಯೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ೪ ವರ್ಷದಲ್ಲಿ ಬಿಜೆಪಿ ಮತ್ತು ಹಿಂದು ಸಂಘ ಪರಿವಾರದ ಕಾರ್ಯಕರ್ತರ ಮೇಲೆ ನಡೆದ ಹಲ್ಲೆ ಮತ್ತು ಹತ್ಯೆ ಪ್ರಕರಣಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಕಳೆದ ೬ ವರ್ಷದಲ್ಲಿ ನಡೆದ ಭಯೋತ್ಪಾದನೆ, ಕೋಮುಗಲಭೆ ಮತ್ತು ಗಲಭೆ ಪ್ರಕರಣಗಳ ಸಂಖ್ಯೆ ಎಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಕಳೆದ ೬ ವರ್ಷದಲ್ಲಿ ನಡೆದ ಕೊಲೆ, ಅತ್ಯಾಚಾರ, ಮಹಿಳಾ ದೌರ್ಜನ್ಯ, ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಈಗಿನ ಸರ್ಕಾರದ ಅವಧಿಯಲ್ಲಿ ಕಾನೂನು ಸುವ್ಯವಸ್ಥೆ ಕುಸಿದು, ದೌರ್ಜನ್ಯ ಪ್ರಕರಣಗಳು ಮತ್ತು ಕೋಮು ಗಲಭೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಭಯೋತ್ಪಾದನೆ, ಕೋಮುಗಲಭೆ ಮತ್ತು ಗಲಭೆ, ಕೊಲೆ, ಅತ್ಯಾಚಾರ, ಮಹಿಳಾ ದೌರ್ಜನ್ಯ, ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳನ್ನು ತಡೆಯಲು ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

**ರಾಜ್ಯದ ಪೊಲೀಸ್ ಇಲಾಖೆಯಲ್ಲಿರುವ ಹುದ್ದೆಗಳ ಬಗ್ಗೆ**

**ಶ್ರೀ ಕಾಂತರಾಜು (ಬಿ.ಎಂ.ಎಲ್.) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೬೮ (೪೬೪೯) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪೊಲೀಸ್ ಇಲಾಖೆಯಲ್ಲಿರುವ ಯಾವ ಯಾವ ವೃಂದದ ಎಷ್ಟು ಸಂಖ್ಯೆಯ ಅಧಿಕಾರಿಗಳ ಹುದ್ದೆಗಳಿವೆ ; ಆ ಹುದ್ದೆಗಳು ಯಾವುವು ; ಸಂಪೂರ್ಣ ವಿವರ ನೀಡುವುದು ; (ಇದರಲ್ಲಿ ರಾಜ್ಯಮಟ್ಟದ, ವಿಭಾಗ ಮಟ್ಟದ/ ವಲಯವಾರು ಮಟ್ಟದ/ಜಿಲ್ಲಾ ಮಟ್ಟದ/ಉಪ ವಿಭಾಗ ಮಟ್ಟದ, ತಾಲ್ಲೂಕು/ಹೋಬಳಿ ಮಟ್ಟದ ಅಧಿಕಾರಿಗಳ ಹುದ್ದೆಗಳು ಸೇರಿದಂತೆ ಸಂಪೂರ್ಣ ಅಂಕಿ ಅಂಶಗಳೊಂದಿಗೆ ಮಾಹಿತಿ ನೀಡುವುದು)

(ಆ) ರಾಜ್ಯದ ಪೊಲೀಸ್ ಇಲಾಖೆಯಲ್ಲಿರುವ ಲಿಪಿಕ ವರ್ಗದ "ಸಿ" ಮತ್ತು "ಡಿ" ದರ್ಜೆ ನೌಕರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದ ಪೊಲೀಸ್ ಇಲಾಖೆಯಲ್ಲಿರುವ ಪೇದೆಗಳ ಸಂಖ್ಯೆ ಎಷ್ಟು ; (ಸಿವಿಲ್, ಸಿ.ಎ.ಆರ್. ಇನ್ನಿತರ ವರ್ಗಗಳು ಸೇರಿದಂತೆ ಪ್ರತ್ಯೇಕ ಮಾಹಿತಿ ನೀಡುವುದು) ಈ ಬಗ್ಗೆ ಜಿಲ್ಲಾವಾರು ಮಾಹಿತಿ ನೀಡುವುದು ;

(ಈ) ರಾಜ್ಯದ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಅಧಿಕಾರಿ/ಲಿಪಿಕ ನೌಕರರು/ಪೇದೆಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವಿವರ ನೀಡುವುದು)

**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ರಾಜಕಾಲುವೆಗಳ ಬಗ್ಗೆ**

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೪೬೯ (೪೨೬೦) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಾಜಕಾಲುವೆಗಳ (SWD) (Primary and Secondary drains) ಉದ್ದ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ರಾಜಕಾಲುವೆಗಳ ಪುನರ್ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಎಷ್ಟು ವರ್ಷವಾಯಿತು ; (ವಿವರಗಳನ್ನು ನೀಡುವುದು)

(ಇ) ಎಲ್ಲಾ ರಾಜಕಾಲುವೆಗಳ ಒತ್ತುವರಿಯಾಗಿದೆಯೇ ; ಹಾಗಿದ್ದಲ್ಲಿ, ವಿವರಗಳನ್ನು ನೀಡುವುದು ;

(ಈ) ರಾಜಕಾಲುವೆಗಳ ಒತ್ತುವರಿಯನ್ನು ಸಂಪೂರ್ಣವಾಗಿ ತೆರವು ಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ವಿವರಗಳನ್ನು ನೀಡುವುದು ;

(ಉ) ಸರ್ಕಾರ ಅಥವಾ ಪಾಲಿಕೆ ಈ ಎಲ್ಲಾ ರಾಜಕಾಲುವೆ ಪುನರ್ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ತೆಗೆದುಕೊಂಡ ಕ್ರಮಗಳೇನು ; (ವಿವರಗಳನ್ನು ನೀಡುವುದು)

(ಊ) ರಾಜಕಾಲುವೆಗಳ ಬಗ್ಗೆ ಮಾನ್ಯ ಲೋಕಾಯುಕ್ತ ಕಛೇರಿಯಲ್ಲಿ ಇರುವ ದೂರುಗಳು ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಎಂ.ಎಸ್.ಐ.ಎಲ್.ನ ರೀಟೆಲ್ ಲಿಕ್ಕರ್ ಅಂಗಡಿಯಿಂದ ಮಹಿಳೆಯರು ಮತ್ತು ಮಕ್ಕಳಿಗೆ ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೭೦ (೪೯೬೫+೪೯೬೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ೬ನೇ ವಾರ್ಡಿನ ಮುನೇಶ್ವರ ಬಡಾವಣೆಯ ೫೦ ಅಡಿ ರಸ್ತೆಯಲ್ಲಿರುವ ಎಂ.ಎಸ್.ಐ.ಎಲ್.ರೀಟೆಲ್ ಲಿಕ್ಕರ್ ಶಾಪ್‌ನಲ್ಲಿ ಈ ಹಿಂದೆ ಕಳ್ಳತನ ಮಾಡಿದ್ದ ಕಳ್ಳರನ್ನು ಹಿಡಿಯಲಾಗಿದೆಯೇ; ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು ; ಹಿಡಿಯದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು ;

(ಆ) ಸದರಿ ಅಂಗಡಿಯಲ್ಲಿ ನಿಯಮಬಾಹಿರವಾಗಿ ಮಕ್ಕಳು ಮತ್ತು ಮಹಿಳೆಯರಿಗೆ ಮದ್ಯ ಮಾರಾಟ ಮಾಡುತ್ತಿರುವುದನ್ನು ನಿಲ್ಲಿಸಲು ಕೈಗೊಂಡ ಕ್ರಮಗಳೇನು;

(ಇ) ಸಮಾಜಘಾತುಕ ಶಕ್ತಿಗಳು ಸಂಜೆ ೭ ಗಂಟೆಯ ನಂತರ ಸಾರ್ವಜನಿಕವಾಗಿ ಸದರಿ ಅಂಗಡಿಯ ಮುಂಭಾಗ ಹಾಗೂ ರಸ್ತೆಯಲ್ಲೇ ಕುಡಿದು ಮಲಗುವುದು

ಹಾಗೂ ಇತರ ಉಪಟಳಗಳಿಂದ ಸದರಿ ಬಡಾವಣೆಯ ಹಾಗೂ ರಸ್ತೆಯಲ್ಲಿ ಸಂಚರಿಸುವ ಮಹಿಳೆಯರು ಮತ್ತು ಮಕ್ಕಳು ತೊಂದರೆಗೆ ಒಳಗಾಗಿದ್ದು ಇದನ್ನು ನಿಲ್ಲಿಸಲು ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಕೈಗೊಳ್ಳುವ ಕ್ರಮಗಳೇನು ;

(ಈ) ಈ ಹಿಂದೆ ಇದೇ ರೀತಿಯ ದೂರುಗಳ ಬಗ್ಗೆ ಪ್ರಸ್ತಾಪಿಸಿದ್ದರೂ ಸಂಬಂಧಿಸಿದ ಠಾಣೆಯ ಅಧಿಕಾರಿಗಳು ಕ್ರಮಕೈಗೊಳ್ಳದೇ ಇರುವುದಕ್ಕೆ ಜವಾಬ್ದಾರಿ ಯಾರು; ಸೂಕ್ತ ಜವಾಬ್ದಾರಿ ನಿಗದಿ ಪಡಿಸಲು ಕೈಗೊಳ್ಳುವ ಕ್ರಮವೇನು ;

(ಉ) ಸದರಿ ಬಡಾವಣೆಯ ನಾಗರಿಕರು ಸರ್ಕಾರಿ ಸಂಸ್ಥೆಯ ಮೇಲ್ಕಂಡ ಉಪಟಳಗಳ ಬಗ್ಗೆ ಲೋಕಾಯುಕ್ತಕ್ಕೆ ನೀಡಿರುವ ದೂರಿನ ಪೂರ್ಣ ವಿವರ ನೀಡುವುದು?

**ರಾಜ್ಯ ಸರ್ಕಾರದ ಹಣಕಾಸಿನ ತೊಂದರೆಯನ್ನು ನೀಗಿಸುವ ಬಗ್ಗೆ**

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೪೭೧ (೪೬೮೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರ ಹಣಕಾಸಿನ ತೊಂದರೆಯನ್ನು ನೀಗಿಸಲು ವಿಶ್ವವಿದ್ಯಾಲಯಗಳಿಂದ ಹಾಗೂ ಕಾರ್ಮಿಕ ಕಲ್ಯಾಣ ನಿಧಿಯಿಂದ ರಾಜ್ಯದ ಖಜಾನೆಗೆ ಹಣ ವರ್ಗಾವಣೆ ಮಾಡಲು ಪ್ರಯತ್ನಿಸಲಾಗುತ್ತಿದೆ ಎನ್ನುವ ವರದಿ ನಿಜವೇ ; ಹಾಗಿದ್ದಲ್ಲಿ, ವಿವರ ನೀಡುವುದು ;

(ಆ) ರಾಜ್ಯದ ಕಾರ್ಮಿಕ ಕಲ್ಯಾಣ ನಿಧಿ, ಕಾರ್ಮಿಕರ ಕ್ಷೇಮಾಭಿವೃದ್ಧಿಗಾಗಿ ಈ ಹಣವನ್ನು ಸರ್ಕಾರ ಇತರ ಅವಶ್ಯಕತೆಗಳಿಗೆ ಉಪಯೋಗ ಮಾಡಲು ಕಾನೂನಿನಲ್ಲಿ ಅವಕಾಶಗಳಿವೆಯೇ ;

(ಇ) ಅದೇ ರೀತಿ ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳಿಂದ ಸಂಗ್ರಹಿಸಿರುವ ಹಣವನ್ನು ವಿಶ್ವವಿದ್ಯಾಲಯಗಳ ಶೈಕ್ಷಣಿಕ ಚಟುವಟಿಕೆಗಳನ್ನು ಹೊರತುಪಡಿಸಿ ಬೇರೆ ಚಟುವಟಿಕೆಗಳಿಗೆ ಉಪಯೋಗಿಸಲು ಅವಕಾಶವಿದೆಯೇ ; ಈ ಕುರಿತಾಗಿ ಸರ್ಕಾರದ ನಿಲುವೇನು ? (ವಿವರ ನೀಡುವುದು)

## ಬೆಳಗಾವಿ ಮಹಾನಗರದ ಸುತ್ತ ರಿಂಗ್ ರೋಡ್ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೭೨ (೪೭೮೯) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಎರಡನೆಯ ರಾಜಧಾನಿಯಾಗಿರುವ ಬೆಳಗಾವಿ ಮಹಾನಗರದ ಸುತ್ತ ರಿಂಗ್ ರೋಡ್ ಇಲ್ಲದೆ ಇರುವುದರಿಂದ ಮಹಾನಗರದಲ್ಲಿ ಸಂಚಾರದ ಒತ್ತಡ ಜಾಸ್ತಿಯಾಗಿ ಸಾರ್ವಜನಿಕರಿಗೆ ತುಂಬಾ ತೊಂದರೆ ಆಗುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಮಹಾನಗರದ ಸುತ್ತ ರಿಂಗ್ ರೋಡ್ ನಿರ್ಮಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಇ) ಬೆಳಗಾವಿ ಮಹಾನಗರದ ಸುತ್ತ ರಿಂಗ್ ರೋಡ್ ನಿರ್ಮಿಸಲು ನೀಲಿ ನಕ್ಷೆ ಸಿದ್ದಪಡಿಸಲಾಗಿದೆಯೇ ; ಅದಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು ;

(ಈ) ಯಾವ ಕಾಲಮಿತಿಯಲ್ಲಿ ಈ ಯೋಜನೆಯು ಕುರಿತು ಕ್ರಮ ಕೈಗೊಳ್ಳಲಾಗುವುದು; ಇದರ ವಿಸ್ತೃತ ವಿವರ ನೀಡುವುದು ?

## ಗುಡಿಬಂಡೆ ತಾಲ್ಲೂಕು ಪಟ್ಟಣ ಪಂಚಾಯತಿ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೭೩ (೪೬೪೬) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಬಳ್ಳಾಪುರ ಜಿಲ್ಲೆ, ಗುಡಿಬಂಡೆ ತಾಲ್ಲೂಕು ಪಟ್ಟಣ ಪಂಚಾಯಿತಿಯಿಂದ ಮುಖ್ಯ ರಸ್ತೆಯ ಅಗಲೀಕರಣದಲ್ಲಿ ಆಸ್ತಿ–ಪಾಸ್ತಿ ಕಳೆದುಕೊಂಡವರ ಸಂಖ್ಯೆ ಎಷ್ಟು ; (ಹೆಸರು, ವಿಳಾಸದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಆ) ಆಸ್ತಿ ಕಳೆದುಕೊಂಡವರಿಗೆ ಸರ್ಕಾರದಿಂದ ಪರಿಹಾರ ಧನ ನೀಡಲಾಗಿದೆಯೇ;

(ಇ) ಹಾಗಿದ್ದಲ್ಲಿ, ನೀಡಲಾಗಿರುವ ಪರಿಹಾರ ಧನ ಎಷ್ಟು ; (ಮಾಹಿತಿ ನೀಡುವುದು)

(ಈ) ನೀಡದಿದ್ದಲ್ಲಿ, ಕಾರಣಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## **ಮುಖ್ಯಮಂತ್ರಿಗಳ ನಗರೋತ್ಥಾನ ಯೋಜನೆಯ ಬಗ್ಗೆ**

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೭೪ (೪೭೬೨) ನಗರಾಭಿವೃದ್ಧಿ ಮತ್ತು ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಲಬುರಗಿ ಹಾಗೂ ಬಳ್ಳಾರಿ ಮಹಾನಗರ ಪಾಲಿಕೆಯಲ್ಲಿ ಬರುವ ಮಹಾನಗರ ಪಾಲಿಕೆಯ ವಾರ್ಡ್‌ಗಳಲ್ಲಿ ''ಮುಖ್ಯಮಂತ್ರಿಗಳ ನಗರೋತ್ಥಾನ'' ಯೋಜನೆಯಡಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಹಾಗೂ ಕಾರ್ಯಚಟುವಟಿಕೆಗಳು ಮತ್ತು ಯೋಜನೆಗಳಾವುವು ; (ಯೋಜನೆವಾರು ಹಾಗೂ ಕಾಮಗಾರಿಗಳವಾರು ಮಾಹಿತಿ ನೀಡುವುದು)

(ಆ) ಸದರಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರತಿಯೊಂದು ವಾರ್ಡಿನ ಅಭಿವೃದ್ಧಿಗಾಗಿ ನಗರೋತ್ಥಾನ ಯೋಜನೆಯಡಿ ಬಿಡುಗಡೆಯಾಗಿರುವ ಅನುದಾನವೆಷ್ಟು ? (ವೆಚ್ಚವಾರು ಹಾಗೂ ಕಾಮಗಾರಿಗಳ ಅಂಕಿ ಅಂಶಗಳ ಸಮೇತ ವಿವರ ನೀಡುವುದು)

## **ರಾಜ್ಯದ ಆರಕ್ಷಕರಲ್ಲಿ ವೃತ್ತಿ ಕೌಶಲ್ಯ ಹೆಚ್ಚಳ ಮಾಡಲು ಆಧುನಿಕ ತಂತ್ರಜ್ಞಾನ ಅಳವಡಿಸುವ ಬಗ್ಗೆ**

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೪೭೫ (೪೬೩೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಆರಕ್ಷಕರಲ್ಲಿ ವೃತ್ತಿ ಕೌಶಲ್ಯ ಹೆಚ್ಚಳ ಹಾಗೂ ತನಿಖಾ ಕ್ರಮಗಳಲ್ಲಿ ಆಧುನಿಕ ತಂತ್ರಜ್ಞಾನ ಅಳವಡಿಸಿಕೊಳ್ಳುವ ನಿಟ್ಟಿನಲ್ಲಿ ಸರ್ಕಾರ ಹಮ್ಮಿಕೊಂಡಿರುವ ಯೋಜನೆ ಏನು ; ಇದಕ್ಕೆ ಒದಗಿಸಿರುವ ಅನುದಾನ ಎಷ್ಟು ;

(ಆ) ಯಾವ ಹಂತದ ಸಿಬ್ಬಂದಿಗೆ ಇದರಲ್ಲಿ ಭಾಗಿಯಾಗಿಸಲಾಗಿದೆ ;

(ಇ) ರಾಜ್ಯಕ್ಕೆ ಬೇಕಾಗಿರುವ ಸಿಬ್ಬಂದಿಗಳು ಎಷ್ಟು ; ಪ್ರಸಕ್ತ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವರ್ಗಾವಾರು ವಿವರ ನೀಡುವುದು)

(ಈ) ಇರುವ ಸಿಬ್ಬಂದಿಯ ಮೇಲೆ ಒತ್ತಡ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

## ಮೆಟ್ರೋ ರೈಲು ನಿಗಮದ ಕಾರ್ಯಾಚರಣೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೪೭೬ (೪೭೨೬) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಮೆಟ್ರೋ ರೈಲು ನಿಗಮದ ಕಾರ್ಯಾಚರಣೆ, ನಿರ್ವಹಣೆ ಮತ್ತು ಮಾನವ ಸಂಪನ್ಮೂಲ ವಿಭಾಗದಲ್ಲಿ ಗುತ್ತಿಗೆ ನಿಯೋಜನೆ ಮೇಲೆ ಎಷ್ಟು ಜನ ಕಾರ್ಯನಿರ್ವಹಿಸುತ್ತಿದ್ದಾರೆ ; ವಿವರವಾದ ಹೆಸರು, ಹುದ್ದೆಯ ಪದನಾಮ, ನಿಗಮಕ್ಕೆ ಸೇರಿದ ದಿನಾಂಕ, ಪಡೆಯುತ್ತಿರುವ ವೇತನ, ಮಾತೃ ಇಲಾಖೆ, ಮುಂತಾದ ವಿವರವಾದ ಮಾಹಿತಿ ಕೊಡುವುದು ;

(ಆ) ಇವರುಗಳು ಹೊರ ರಾಜ್ಯ ಮತ್ತು ಬೇರೆ ಇಲಾಖೆಗಳಿಂದ ಬಂದವರಾಗಿದ್ದು, ಇವರ ಅಧೀನದಲ್ಲಿ ಕೆಲಸ ನಿರ್ವಹಿಸುವ ಕನ್ನಡಿಗ ಖಾಯಂ ನೌಕರರಿಗೆ ಮಾನಸಿಕ ಕಿರುಕುಳ ನೀಡುತ್ತಿರುವುದು ನಿಜವೇ ;

(ಇ) ಒಬ್ಬರಿಗೆ ಸಣ್ಣ ವಿಚಾರಕ್ಕೆ ದೊಡ್ಡ ಶಿಕ್ಷೆ ನೀಡುವುದು ಮತ್ತು ಒಬ್ಬರಿಗೆ ದೊಡ್ಡ ತಪ್ಪಿಗೆ ಯಾವುದೇ ಶಿಕ್ಷೆ ನೀಡದಿರುವುದು ನ್ಯಾಯವೇ ;

(ಈ) ರೈಲು ರೆಡ್ ಸಿಗ್ನಲ್ ಕ್ರಾಸ್ ಮಾಡಿದ ವಿಚಾರಕ್ಕೆ ಮತ್ತು ಪಾಯಿಂಟ್ ಮಿಷನ್ ಹಾಳಾಗಿದ್ದಕ್ಕೆ ಯಾರಿಗೆ ನೋಟಿಸ್ ನೀಡಲಾಗಿದೆ ; ಎಷ್ಟು ಜನರಿಗೆ ಶಿಕ್ಷೆ ನೀಡಲಾಗಿದೆ ; (ವಿವರವಾದ ಮಾಹಿತಿ ಕೊಡುವುದು)

(ಉ) ಸರ್ಕಾರವು ಯಾವ ಕಾಲಮಿತಿಯೊಳಗೆ ಹೊರರಾಜ್ಯ ಮತ್ತು ಬೇರೆ ಇಲಾಖೆಯಿಂದ ನಿಯೋಜನೆಗೊಂಡಿರುವ ಮತ್ತು ಗುತ್ತಿಗೆಯಡಿ ಕಾರ್ಯನಿರ್ವಹಿಸುವ ಅಧಿಕಾರಿಗಳನ್ನು ಬದಲಾಯಿಸಲಾಗುವುದು ?

## ಜನ ಸಾಮಾನ್ಯರನ್ನು ರೌಡಿ ಶೀಟರ್ ಪಟ್ಟಿಗೆ ಸೇರಿಸುತ್ತಿರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೭೭ (೪೬೭೬) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕ್ಷುಲ್ಲಕ ಕಾರಣಗಳಿಗಾಗಿ ಜನ ಸಾಮಾನ್ಯರನ್ನು ರೌಡಿ ಶೀಟರ್ ಪಟ್ಟಿಗೆ ಸೇರಿಸುತ್ತಿರುವುದರಿಂದ ಅವರು ಸಮಾಜದಲ್ಲಿ ಗೌರವದಿಂದ ಬಾಳ್ವೆ ನಡೆಸಲು ಸಾಧ್ಯವಾಗುತ್ತಿಲ್ಲದಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಬ್ಬ ವ್ಯಕ್ತಿಯನ್ನು ರೌಡಿ ಶೀಟರ್ ಎಂದು ಘೋಷಿಸಲು ಮತ್ತು ರೌಡಿ ಶೀಟರ್ ಪಟ್ಟಿಯಿಂದ ಹೆಸರನ್ನು ತೆಗೆಯಲು ಸರ್ಕಾರವು ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಒಬ್ಬ ವ್ಯಕ್ತಿಯನ್ನು ರೌಡಿ ಶೀಟರ್ ಎಂದು ಘೋಷಿಸಲು ಮತ್ತು ರೌಡಿ ಶೀಟರ್ ಪಟ್ಟಿಯಿಂದ ಹೆಸರನ್ನು ತೆಗೆಯಲು ಯಾರಿಗೆ ಅಧಿಕಾರ ಪ್ರತ್ಯಾಯೋಜಿಸಲಾಗಿದೆ ?

## ಬೆಂಗಳೂರು ಮೆಟ್ರೋ ರೈಲುಗಳಲ್ಲಿ ಹೆಚ್ಚುವರಿ ಬೋಗಿಗಳನ್ನು ಅಳವಡಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)–**

೪೭೮ (೪೬೬೫) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಮೆಟ್ರೋ ರೈಲುಗಳಲ್ಲಿ ಜನ ದಟ್ಟಣೆಯ ವೇಳೆಯಲ್ಲಿ ಪ್ರಯಾಣಿಕರ ಒತ್ತಡದಿಂದಾಗಿ ಮಹಿಳೆಯರು, ಮಕ್ಕಳು ಹಾಗೂ ಹಿರಿಯ ನಾಗರಿಕರ ಪ್ರಯಾಣಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಪ್ರಸ್ತುತ ಇರುವ ೩ ಬೋಗಿಗಳ ಸಂಖ್ಯೆಯನ್ನು ೬ ಬೋಗಿಗಳಿಗೆ ಹೆಚ್ಚಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಹೆಚ್ಚಿಸಲಾಗುವುದು ;

(ಈ) ೬ ಬೋಗಿಗಳಿಗೆ ಹೆಚ್ಚಿಸಿದ ನಂತರ ಮಹಿಳೆಯರಿಗಾಗಿಯೇ ಪ್ರತ್ಯೇಕ ಬೋಗಿಗಳನ್ನು ಮೀಸಲಾಗಿಡಲಾಗುವುದೇ ? (ವಿವರ ನೀಡುವುದು)

**ಆರ್ಥಿಕ ಇಲಾಖೆಯ ಬಾಕಿ ಕಡತ ಕುರಿತು**

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೪೭೬ (೪೭೦೫) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೬ನೇ ವೇತನ ಆಯೋಗದ ಕೆಲಸ ಕಾರ್ಯಗಳಿಗೆ ಮಾಹಿತಿ ಒದಗಿಸಲು/ ಅನುವಾಗಲು ಎಷ್ಟು ಇಲಾಖೆಗಳಲ್ಲಿ ಸಂಪರ್ಕಾಧಿಕಾರಿಗಳನ್ನು ನೇಮಿಸಲಾಗಿದೆ ; ಇಲಾಖಾವಾರು ಹೆಸರು ಸಹಿತ ದೂರವಾಣಿ ಸಂಖ್ಯೆಯೊಂದಿಗೆ ಮಾಹಿತಿ ನೀಡುವುದು ; ಸದರಿ ಸಂಪರ್ಕಾಧಿಕಾರಿಗಳು ೬ನೇ ವೇತನ ಆಯೋಗಕ್ಕೆ ಮಾಹಿತಿಗಳನ್ನು ಒದಗಿಸಿರುತ್ತಾರೆಯೇ ;

(ಆ) ೨೦೧೭–೧೮ನೇ ಸಾಲಿನ ಆಯವ್ಯಯದಲ್ಲಿ ಮಹಿಳಾ ಉದ್ದೇಶಿತ ಆಯವ್ಯಯದ ಮೂಲಕ ಮಹಿಳೆಯರಿಗೆ ಒಟ್ಟು ಎಷ್ಟು ಹಣವನ್ನು ಯಾವ ಯಾವ ಇಲಾಖೆಯಲ್ಲಿ ಮತ್ತು ಯಾವ ಯಾವ ಯೋಜನೆಗಳಲ್ಲಿ ಹಂಚಿಕೆ ಮಾಡಲಾಗಿತ್ತು ; ಇವುಗಳಲ್ಲಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ರಾಜ್ಯದಲ್ಲಿರುವ ಮಹಿಳಾ ಸರ್ಕಾರಿ ನೌಕರರ/ಅರೆ ಸರ್ಕಾರಿ ನೌಕರರ/ ಖಾಸಗಿ ನೌಕರರ ಸಂಖ್ಯೆ ಎಷ್ಟು ;

(ಇ) ಕಳೆದ ಮೂರು ಆರ್ಥಿಕ ವರ್ಷಗಳಲ್ಲಿ ರಾಜ್ಯ ಸರ್ಕಾರದ ಯಾವ ಯಾವ ಇಲಾಖೆ ವಾರ್ಷಿಕ ಅನುದಾನಕ್ಕಿಂತಲೂ ಹೆಚ್ಚು ಖರ್ಚನ್ನು ಮಾಡಿರುತ್ತವೆ; ಸದರಿ ಹೆಚ್ಚುವರಿ ವೆಚ್ಚಕ್ಕೆ ಆರ್ಥಿಕ ಇಲಾಖೆಯ ಅನುಮೋದನೆ ನೀಡಲಾಗಿದೆಯೇ ; ನೀಡದೇ ಇದ್ದಲ್ಲಿ, ಅನುಮೋದನೆ ಪಡೆಯದ ಇಲಾಖೆಗಳೆಷ್ಟು ;

(ಈ) ರಾಜ್ಯದ ಆರ್ಥಿಕ ಇಲಾಖೆಯಲ್ಲಿ ೦೧/೦೪/೨೦೧೬ರಿಂದ ಇಲ್ಲಿಯವರೆಗೆ ಆಡಳಿತಾತ್ಮಕ ಅನುಮೋದನೆಗಾಗಿ, ಆರ್ಥಿಕ ಅನುಮೋದನೆಗಾಗಿ ಯಾವ ಯಾವ ಇಲಾಖೆಯ ಎಷ್ಟು ಕಡತಗಳು ಬಾಕಿ ಇರುತ್ತದೆ ; ಕಳೆದ ಮೂರು ವರ್ಷಗಳಲ್ಲಿ ಆರ್ಥಿಕ ಇಲಾಖೆಯಲ್ಲಿ ಬಾಕಿಯಿರುವ ಕಡತಗಳ ಶೇಕಡಾವಾರು ಪ್ರಮಾಣವೆಷ್ಟು ;

(ಉ) ಪ್ರಸಕ್ತ ಸಾಲಿನಲ್ಲಿ ಇಲ್ಲಿಯವರೆಗೆ ರಾಜ್ಯ ಸರ್ಕಾರಕ್ಕೆ ಬಂದಿರುವ ಸ್ವಂತ ತೆರಿಗೆ ರಾಜಸ್ವ (ಇಲಾಖಾವಾರು) ಎಷ್ಟು ; ಕೇಂದ್ರ ಸರ್ಕಾರದಿಂದ ತೆರಿಗೆ ಹಂಚಿಕೆಯ ಮೂಲಕ ಬಂದಿರುವ ಹಣವೆಷ್ಟು ; ಕೇಂದ್ರ ಸರ್ಕಾರದಿಂದ ಸಹಾಯಧನದ ಮೂಲಕ ಬಂದಿರುವ ಹಣವೆಷ್ಟು ; ಇವುಗಳಲ್ಲಿ ಯಾವ ಬಾಬ್ತಿನಲ್ಲಿ ಕೊರತೆ ಇರುತ್ತದೆ ;

(ಊ) ರಾಜ್ಯ ಸರ್ಕಾರದಲ್ಲಿ ಪ್ರಸಕ್ತ ಸಾಲಿನಲ್ಲಿ ಇರುವ ವಿತ್ತೀಯ ಕೊರತೆ ಎಷ್ಟು; ರಾಜಸ್ವ ಕೊರತೆ ಎಷ್ಟು ; ಪ್ರಾಥಮಿಕ ಕೊರತೆ ಎಷ್ಟು ; ಇವುಗಳ ಕೊರತೆಯಿಂದ ಜಿ.ಎಸ್.ಡಿ.ಪಿ. ಪ್ರಮಾಣದಲ್ಲಿ ಆಗಿರುವ ಬದಲಾವಣೆ ಎಷ್ಟು ?

## ಸರಕಾರಿ ನೌಕರರ ಮೇಲೆ ದಾಖಲಾಗಿರುವ ಲೋಕಾಯುಕ್ತ ಮತ್ತು ಎ.ಸಿ.ಬಿ. ಪ್ರಕರಣಗಳ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೮೦ (೪೭೦೨) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಲೋಕಾಯುಕ್ತ ಮತ್ತು ಎ.ಸಿ.ಬಿ. ತನಿಖಾ ಸಂಸ್ಥೆಯಲ್ಲಿ ಕಳೆದ ೪ ವರ್ಷದಲ್ಲಿ ರಾಜ್ಯದ ವಿವಿಧ ಇಲಾಖೆಯಲ್ಲಿನ ಅಧಿಕಾರಿ/ನೌಕರರ ವಿರುದ್ಧ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಆ) ಲೋಕಾಯುಕ್ತ ಮತ್ತು ಎ.ಸಿ.ಬಿ. ತನಿಖಾ ಸಂಸ್ಥೆಗಳು, ವಿವಿಧ ಇಲಾಖೆಯ ನೌಕರರ/ಅಧಿಕಾರಿಗಳ ವಿರುದ್ಧದ ಇಲಾಖಾ ವಿಚಾರಣೆಗೆ ಸರ್ಕಾರದ ಹಂತದಲ್ಲಿ ಅನುಮತಿಗೆ ಸ್ವೀಕೃತವಾದ ಹಾಗೂ ಬಾಕಿಯಿರುವ ಪ್ರಕರಣಗಳೆಷ್ಟು; (೪ ವರ್ಷಗಳ ಇಲಾಖಾವಾರು ಮಾಹಿತಿ ಒದಗಿಸುವುದು)

(ಇ) ರಾಜ್ಯದ ವಿವಿಧ ಇಲಾಖೆಯಲ್ಲಿನ ಅಧಿಕಾರಿ/ನೌಕರರ ವಿರುದ್ಧ ಎಷ್ಟು ಪ್ರಕರಣಗಳನ್ನು ಲೋಕಾಯುಕ್ತ ಮತ್ತು ಎ.ಸಿ.ಬಿ. ತನಿಖಾ ಸಂಸ್ಥೆಗೆ ವಹಿಸಲಾಗಿದೆ ;

(ಈ) ಅನೇಕ ಪ್ರಕರಣಗಳಲ್ಲಿ ಇಲಾಖೆಯ ಆಡಳಿತದ ಮತ್ತು ಕಾರ್ಯವೈಖರಿ ಮಾಹಿತಿಯಿಲ್ಲದೇ ತನಿಖಾ ಸಂಸ್ಥೆಗಳು ಅಗತ್ಯ ಸಾಕ್ಷ್ಯಗಳ ಕೊರತೆ ಇರುವಾಗಲೂ ತನಿಖೆಯ ಹೆಸರಿನಲ್ಲಿ ಕಿರುಕುಳ ನೀಡುತ್ತಿರುವುದು ಗುರುತರವಾದ ಗಂಭೀರ ಲೋಪಗಳಿಲ್ಲದಿದ್ದರೂ, ಸೇವೆಯಿಂದ ವಜಾದಂತಹ ಶಿಕ್ಷೆ ವಿಧಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ತನಿಖೆಗೆ ಅನುಮತಿಯನ್ನು ಶೀಘ್ರದಲ್ಲಿ ನೀಡಲು ಮತ್ತು ಕಾಲಮಿತಿಯಲ್ಲಿ ತನಿಖೆ ಮುಗಿಸಲು, ತನಿಖೆಯ ವೇಳೆ ಇಲಾಖೆಯ ಆಡಳಿತಾತ್ಮಕ ವಿಷಯದ ಕುರಿತು ಇಲಾಖೆಯ ಸಹಯೋಗದೊಂದಿಗೆ ತನಿಖೆ ನಡೆಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ; ಸರ್ಕಾರದ ನಿಲುವೇನು ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500